# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 174 /2022-23 ದಿನಾಂಕ : 10-11-2022

ದಿನಾಂಕ: 05-11-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಹಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀನಿವಾಸಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ಪಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಎಸ್.ಹೇಮಂತ್‌ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 10 | ಅನ್ನಪೂರ್ಣ | ಪಿ.ಎಸ್.ಐ ಶಂಕರಪುರಂ | |

ದಿನಾಂಕ 05-11-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮು.ತಿ.ನೋ

ಮೊದಲಿಗೆ ಸಭೆಯಲ್ಲಿ ಹಾಜರಿದ್ದ ಶ್ರೀ.ಮಣಿ ಎಂಬುವವರು ಮಾತನಾಡಿ, ಕವಿಲಕ್ಷ್ಮೀಶ ರಸ್ತೆಯಲ್ಲಿ ಆರ್.ಸಿ.ಸಿ.ಚರಂಡಿಯನ್ನು ಮಾಡುತ್ತಿದ್ದು ವಾಲೆಗಳನ್ನು ನಿರ್ಮಿಸಲಾಗಿರುತ್ತದೆ, ಸದರಿ ವಾಲ್‌ಗಳನ್ನು ಮಳೆ ನೀರು ಹರಿಯಲು ಶೋಲ್ಡರ್ಸ್‌ಗಳನ್ನು ಮಾಡಿರುವುದಿಲ್ಲ ಎಂಬ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಸದರಿ ಕಾಮಗಾರಿಯು ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದಿಂದ ಕೈಗೊಂಡಿದ್ದು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸುವುದಾಗಿ ಮಾನ್ಯ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಓ.ವಿ. ಜಯಕುಮಾರ್ ರವರು ಮಾತನಾಡಿ ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ನೀಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಮಾಡುವಂತೆ ಹಾಗೂ ಹಸುವಿನ ಸಗಣಿಯನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಕ್ರಮ ಕೈಗೊಳ್ಳಬೇಕೆಂದು ಸಭೆಯ ಗಮನಕ್ಕೆ ತಂದರು, ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಬಗ್ಗೆ ಚರ್ಚಿಸಿ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ಸಭೆಗೆ ಬಂದಿದ್ದ ಕು!! ಪೂಜಾರವರು ಮಾತನಾಡಿ ಮಾವಳ್ಳಿ ಪ್ರದೇಶಗಳಲ್ಲಿ ಹಸಿಕಸಿ ಮತ್ತು ಒಣಕಸವನ್ನು ವಿಂಗಡಿಸಿ ಪಡೆಯುತ್ತಿಲ್ಲ ಮತ್ತು ಬ್ಯಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಹಾಗೂ ಹಸುಗಳನ್ನು ಸಹ ರಸ್ತೆಗಳಲ್ಲಿಯೇ ಬಿಟ್ಟಿರುತ್ತಾರೆ. ಮತ್ತು ಮಾವಳ್ಳಿಯಲ್ಲಿ ಹಬ್ಬಗಳೆಂದು ವಾದ್ಯಗೋಷ್ಠಿಯನ್ನು ಏರ್ಪಡಿಸಿ ಜೋರಾಗಿ ಧ್ವನಿ ವರ್ಧಕಗಳನ್ನು ಅಳವಡಿಸಿ ನಿಗಧಿತ ಸಮಯಕ್ಕೆಂತೆ ಹೆಚ್ಚಿನ ಸಮಯ ಕಾರ್ಯಕ್ರಮವನ್ನು ನಡೆಸುವುದರಿಂದ ತೊಂದರೆಯಾಗುತ್ತಿರುವುದಾಗಿ ಹಾಗೂ ಕೃಂಬುಗಲ್ ರಸ್ತೆಯ ಚರಂಡಿ ಕಲ್ಲುಗಳು ಅಲುಗಾಡುವುದರಿಂದ ಪಾದಚಾರಿಗಳಿಗೆ ನಡೆದಾಡಲು ಕಷ್ಟವಾಗುತ್ತಿರುವುದಾಗಿ ಸಭೆಗೆ ತಿಳಿಸಿದರು ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ವಾರ್ಡ್ ಅಭಿಯಂತರರು, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ನಂತರ ಸಭೆಗೆ ಹಾಜರಾಗಿದ್ದ ಶ್ರೀ.ಅಂಬರೀಶ್ ರವರು ಮಾತನಾಡಿ ಸಜ್ಜನರಾವ್ ವೃತ್ತದ ಬಳಿ ಇರುವ ಐಲ್ಯಾಂಡ್‌ನಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಪ್ಪಿಸಲು ಮಾರ್ಷಲ್‌ಗಳನ್ನು ನೇಮಿಸಿ ಬೋರ್ಡ್ ಅಳವಡಿಸುವಂತೆ ಕೋರಿದರು. ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ರಾಜು ಮತ್ತು ವಿ.ಜೆ.ಪ್ರಸಾದ್ ರವರು ಮಾತನಾಡುತ್ತಾ ವಾರ್ಡ ವ್ಯಾಪಿಯಲ್ಲಿ ಒಣಗಿದ ಮರದ ಕೊಂಬೆಗಳನ್ನು ತೆರವುಗೊಳಿಸಬೇಕು ಕನ್ಸರ್‌ವೆನ್ಸಿಯಗಳಲ್ಲಿ ಕಾರುಗಳನ್ನು ನಿಲ್ಲಿಸುತ್ತಿರುವುದು ಮತ್ತು ಒತ್ತುವರಿ ಮಾಡಿಕೊಂಡಿರುವುದನ್ನು ತೆರವುಗೊಳಿಸಬೇಕು ಹಾಗೂ ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾಗಿದ್ದ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಕೋರಿದರು, ಇವುಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯಂತೆ ಸಾಧಿಸಿಕೊಂಡು ಕ್ರಮ ವಹಿಸುವಂತೆ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸೂಚಿಸಿದರು

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)